ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

14

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಸಭೆ ಕಲಾಪಗಳು

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE 2/3/2021

### ಹುಣಸೋಡು ಸ್ಫೋಟ : ನ್ಯಾಯಾಂಗ ತನಿಖೆಗೆ ಸಿದ್ದರಾಮಯ್ಯ ಪಟ್ಟು

# ವಿಧಾನಸಭೆ: ಕಾಂಗ್ರೆಸ್ ಸಭಾತ್ಯಾಗ

2-3-2021

ಪ್ರಜಾವಾಣಿ ವಾರ್ತೆ

ಬೆಂಗಳೂರು: ಶಿವಮೊಗ್ಗ ಜಿಲ್ಲೆಯ ಹುಣಸೋಡು ಸ್ಫೋಟ ಪ್ರಕರಣ ವಿಧಾನಮಂಡಲದ ಉಭಯ ಸದನಗಳಲ್ಲಿ ಪ್ರತಿಧ್ವನಿಸಿದ್ದು, ಸರ್ಕಾರದ ಪರವಾಗಿ ಗೃಹ ಹಾಗೂ ಕಾನೂನು ಸಚಿವ ಬಸವರಾಜ ಬೊಮ್ಮಾಯಿ ನೀಡಿದ ಉತ್ತರದಿಂದ ತೃಪ್ತರಾಗದ ಕಾಂಗ್ರೆಸ್ ಸದಸ್ಯರು ವಿಧಾನಸಭೆಯಲ್ಲಿ ಸಭಾತ್ಯಾಗ ಮಾಡಿದರು.

ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರು ಹೈಕೋರ್ಟ್ ನ್ಯಾಯಾಧೀಶರಿಂದ ತನಿಖೆ ನಡೆಸಬೇಕು ಎಂದು ಪಟ್ಟು ಹಿಡಿದರು. ಇದನ್ನು ಒಪ್ಪದ ಬಸವರಾಜ ಬೊಮ್ಮಾಯಿ, ಕಂದಾಯ ಇಲಾಖೆ ಆಯುಕ್ತರಿಂದ ತನಿಖೆ ನಡೆಸುವುದಾಗಿ ಹೇಳಿದರು.

ಸರ್ಕಾರದ ಉತ್ತರದಿಂದ ತೃಪ್ತರಾಗದ ಸಿದ್ದರಾಮಯ್ಯ, 'ಹೈಕೋರ್ಟ್ ನ್ಯಾಯಮೂರ್ತಿಗಳಿಂದಲೇ ತನಿಖೆ ನಡೆಸಬೇಕು. ಬೇರೆ ತನಿಖೆಗೆ ಒಪ್ಪುವುದಿಲ್ಲ. ಅಕ್ರಮ ಗಣಿಗಾರಿಕೆಯಲ್ಲಿ ರಾಜಕಾರಣಿಗಳೂ ಶಾಮೀಲಾಗಿದ್ದಾರೆ ಎಂಬ ಆರೋಪವೂ ಇದೆ. ಇಂತಹವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲು ನ್ಯಾಯಾಂಗ ತನಿಖೆಯೇ ಸೂಕ್ತ' ಎಂದು ಅಭಿಪ್ರಾಯಪಟ್ಟರು.

'ಈ ಪ್ರಕರಣದಲ್ಲಿ ಶಿವಮೊಗ್ಗ ಜಿಲ್ಲಾಧಿಕಾರಿ ಅವರ ಲೋಪ ಇದೆ. ಅವರಿಂದ ತನಿಖೆ ನಡೆಸಿದರೆ ನ್ಯಾಯ ಸಿಗುವುದಿಲ್ಲ. ಕಂದಾಯ ಆಯುಕ್ತರಿಂದ ತನಿಖೆಯೂ ಪರಿಣಾಮಕಾರಿ ಆಗದು' ಎಂದು ಪ್ರತಿಪಾದಿಸಿದರು.

'ಅರಣ್ಯ ಪ್ರದೇಶಗಳಲ್ಲಿರುವ ಅಕ್ರಮ ಗಣಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಶಿವಮೊಗ್ಗ ಡಿಸಿಎಫ್ ಅವರು ಜಿಲ್ಲಾಧಿಕಾರಿ ಅವರಿಗೆ ಜನವರಿ 6ರಂದು ಪತ್ರ ಬರೆದಿದ್ದರು. ಆದರೂ, ಜಿಲ್ಲಾಧಿಕಾರಿ ಕ್ರಮ ಕೈಗೊಂಡಿರಲಿಲ್ಲ. ಆಂಧ್ರದಿಂದ ಸಾಗಣೆ ಮಾಡಿಕೊಂಡು ಬಂದ ಜಿಲೆಟಿನ್ ಅನ್ನು ಎಲ್ಲೂ ತಪಾಸಣೆ ಮಾಡಲಿಲ್ಲ ಎಂದರೆ ನಮ್ಮ ವ್ಯವಸ್ಥೆ ಹೇಗಿದೆ ಎಂಬುದನ್ನು ಊಹಿಸಬಹುದು' ಎಂದರು.

**ಪರಿಷತ್ತಿನಲ್ಲೂ ಒತ್ತಾಯ:** 'ಮುಖ್ಯಮಂತ್ರಿಯವರ ಜಿಲ್ಲೆಯಲ್ಲಿಯೇ ಈ ರೀತಿ ಆಗುತ್ತದೆ ಅಂದರೆ, ಯಾರು ರಕ್ಷಣೆ ಮಾಡಬೇಕು. ಬೇಲಿಯೇ ಎದ್ದು ಹೊಲ ಮೇದಂತೆ ಆಗಿದೆ. ಘಟನೆಗೆ ಯಾರು ಕಾರಣರಾಗಿದ್ದಾರೊ ಅವರಿಗೆ ಶಿಕ್ಷೆಯಾಗಬೇಕು' ಎಂದು ವಿಧಾನ ಪರಿಷತ್‌ನಲ್ಲಿ ವಿರೋಧ ಪಕ್ಷದ ನಾಯಕ ಎಸ್.ಆರ್.ಪಾಟೀಲ ಅವರು ಆಗ್ರಹಿಸಿದರು.

ಕಾಂಗ್ರೆಸ್‌ನ ಎಸ್. ರವಿ ಮಾತನಾಡಿ, ಈ ಪ್ರಕರಣ ಅತ್ಯಂತ ಗಂಭೀರ ಸ್ವರೂಪದ್ದು. ಹೀಗಾಗಿ, ರಾಷ್ಟ್ರೀಯ ತನಿಖಾ ಏಜೆನ್ಸಿ (ಎನ್‌ಐಎ) ಮೂಲಕ ತನಿಖೆ ನಡೆಸಬೇಕು' ಎಂದು ಆಗ್ರಹಿಸಿದರು.

ಕಾಂಗ್ರೆಸ್‌ನ ಆರ್. ಪ್ರಸನ್ನಕುಮಾರ್, ನಾರಾಯಣಸ್ವಾಮಿ, ಆರ್. ಬಿ. ತಿಮ್ಮಾಪುರ, ಪಿ.ಆರ್. ರಮೇಶ, ಜೆಡಿಎಸ್‌ನ ಮರಿತಿಬ್ಬೇಗೌಡ, ರಮೇಶಗೌಡ, ಬಿಜೆಪಿ ತೇಜಸ್ವಿನಿ ಗೌಡ ಕೂಡಾ ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು ಎಂದು ಒತ್ತಾಯಿಸಿದರು.



ವಿಧಾನಸಭೆಯಲ್ಲಿ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಮಾತನಾಡಿದರು

## 'ಪುಢಾರಿಗಳು– ಅಧಿಕಾರಿಗಳು ಭಾಗಿ'

'ಹುಣಸೋಡಿನ ಸ್ಫೋಟದ ಹಿಂದೆ ರಾಜಕೀಯ ಪುಢಾರಿಗಳು, ಅಧಿಕಾರಿಗಳು ಇದ್ದಾರೆ. ಅವರೆಲ್ಲೂ ಅಕ್ರಮ ಗಣಿಗಾರಿಕೆಗೆ ಕೈ ಜೋಡಿಸಿದ್ದಾರೆ' ಎಂದು ಬಿಜೆಪಿಯ ಆಯನೂರು ಮಂಜುನಾಥ್ ಆರೋಪಿಸಿದರು.

ವಿಧಾನ ಪರಿಷತ್‌ನಲ್ಲಿ ಮಾತನಾಡಿದ ಅವರು, 'ಎಲ್ಲ ಸರ್ಕಾರಗಳ ಅವಧಿಯಲ್ಲೂ ಈ ದಂಧೆ ನಡೆದುಕೊಂಡು ಬಂದಿದೆ. ಪೊಲೀಸ್ ಅಧಿಕಾರಿಗಳು, ಕಂದಾಯ, ಅರಣ್ಯ, ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳ ಗಮನಕ್ಕೆ ಈ ದಂಧೆ ಇಷ್ಟು ವರ್ಷ ಯಾಕೆ ಗಮನಕ್ಕೆ ಬಂದಿಲ್ಲ' ಎಂದು ಪ್ರಶ್ನಿಸಿದರು.

'ಹುಣಸೋಡಿನ ಸ್ಫೋಟದಲ್ಲಿ ಮೃತಪಟ್ಟವರು ಕಾರ್ಮಿಕರಲ್ಲ.ಸ್ಫೋಟಕ ಸಾಗಣೆಗೆ ಕೈ ಜೋಡಿಸಿದ ಸಮಾಜ ದ್ರೋಹಿಗಳು, ಅವರಿಗೆ ಸರ್ಕಾರ ಪರಿಹಾರ ಕೊಡಬೇಕಿಲ್ಲ' ಎಂದೂ ಹೇಳಿದರು.

## 'ಎಷ್ಟೇ ಪ್ರಭಾವಿಗಳಿದ್ದರೂ ಬಿಡಲ್ಲ'

'ಅಕ್ರಮ ಗಣಿಗಾರಿಕೆಯಲ್ಲಿ ಎಷ್ಟೇ ಪ್ರಭಾವಿಗಳಿದ್ದರೂ ಅವರನ್ನು ಬಿಡುವುದಿಲ್ಲ. ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳುತ್ತೇವೆ' ಎಂದು ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.

ವಿಧಾನಸಭೆಯಲ್ಲಿ ಕಾಂಗ್ರೆಸ್‌ನ ಟೀಕೆಗೆ ಸುದೀರ್ಘ ಉತ್ತರ ನೀಡಿದ ಅವರು, ಕರ್ನಾಟಕ ಉಪಖನಿಜ (ತಿದ್ದುಪಡಿ) ನಿಯಮ 2020 ರ ಅನ್ವಯ ಅಕ್ರಮ ಖನಿಜ ಸಾಗಣೆಯ ಮೇಲೆ ರಾಜಧನದ 20 ಪಟ್ಟು ದಂಡ ವಿಧಿಸಲಾಗುವುದು. ಅನಧಿಕೃತ ಕ್ರಷರ್ ಚಾಲನೆಗಾಗಿ ಗರಿಷ್ಠ ₹ 2 ಲಕ್ಷ ದಂಡ ಮತ್ತು 2 ವರ್ಷ ಕಾರಾಗೃಹ ಶಿಕ್ಷೆ ವಿಧಿಸಲಾಗುವುದು ಎಂದು ತಿಳಿಸಿದರು.

ಖನಿಜ ಸಾಗಾಣಿಕೆ ಪರವಾನಗಿ ಇಲ್ಲದೆ ಗಣಿಗಾರಿಕೆ ಮತ್ತು ಸಾಗಣೆ ಮಾಡುವುದನ್ನು ತಡೆಗಟ್ಟಲು 2020-21 ನೇ ಸಾಲಿನಲ್ಲಿ ಡ್ರೋಣ್ ಮೂಲಕ ಸರ್ವೆ ನಡೆಸಲು ಅನುಮೋದನೆ ನೀಡಲಾಗಿದ್ದು, ಈ ಸೇವೆ ಪಡೆಯಲು ಪ್ರತಿ ಜಿಲ್ಲೆಯಲ್ಲೂ ಟೆಂಡರ್ ಪ್ರಕ್ರಿಯೆ ನಡೆಸಲಾಗಿದೆ ಎಂದರು.

ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿದ್ದು, ಇದರಲ್ಲಿ ಅರಣ್ಯ, ಪೊಲೀಸ್, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಗಣಿ, ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರಾಗಿರುತ್ತಾರೆ ಎಂದು ಅವರು ಹೇಳಿದರು.